<u>**ಕರ್ನಾಟಕ ಸರ್ಕಾರದ ನಡವಳಿಗಳು**</u>

**ವಿಷಯ:** ಖಜಾನೆಗಳಲ್ಲಿ ವರ್ಷಾಂತ್ಯದ ಬಿಲ್ಲುಗಳನ್ನು ಮಾರ್ಚ್ 31ರಂದೇ ತೀರ್ಣಗೊಳಿಸಿ ಲೆಕ್ಕವನ್ನು ಮುಕ್ತಾಯಗೊಳಿಸುವ ಬಗ್ಗೆ.

**ಓದಲಾಗಿದೆ:** 1. ಸರ್ಕಾರಿ ಆದೇಶ ಸಂಖ್ಯೆ: ಆಇ 01 ಬಿಪಿಇ 2020, ದಿನಾಂಕ:08-01-2020
2. ಸರ್ಕಾರಿ ಆದೇಶ ಸಂಖ್ಯೆ: ಆಇ 01 ಬಿಪಿಇ 2020, ದಿನಾಂಕ:19-02-2020

* * * * *

<u>ಪ್ರಸ್ತಾವನೆ:-</u>

2019-20ನೇ ಸಾಲಿನ ವರ್ಷಾಂತ್ಯದ ಬಿಲ್ಲುಗಳನ್ನು ಖಜಾನೆಗಳಲ್ಲಿ ಸ್ವೀಕರಿಸಿ ತೀರ್ಣಗೊಳಿಸಿ ದಿನಾಂಕ:30-3-2020ರಂದೇ 2019-20ನೇ ಸಾಲಿನ ಲೆಕ್ಕಗಳನ್ನು ಮುಕ್ತಾಯಗೊಳಿಸಲು ಮೇಲೆ (1) & (2) ರಲ್ಲಿ ಓದಲಾದ ಆದೇಶಗಳಲ್ಲಿ ಕಾಲಮಿತಿ ಸೂಚಿಸಿ ವೇಳಾಪಟ್ಟಿಯನ್ನು ನಿಗಧಿಪಡಿಸಲಾಗಿತ್ತು.

ಕಛೇರಿ ವೆಚ್ಚಗಳಿಗೆ ಸಂಬಂಧಿಸಿದಂತೆ ಸಾದಿಲ್ವಾರು ಬಿಲ್ಲುಗಳು/ಪ್ರಯಾಣ ಭತ್ಯೆ ಬಿಲ್ಲುಗಳು ಹಾಗು ವಿದ್ಯುಚ್ಛಕ್ತಿ, ದೂರವಾಣಿ ಹಾಗೂ ಕಟ್ಟಡ ಬಾಡಿಗೆಗೆ ಸಂಬಂಧಿಸಿದ ಬಿಲ್ಲುಗಳನ್ನು ಬಹುತೇಕ ಇಲಾಯೆಗಳು ವಿಸ್ತರಿಸುವಂತೆ ಕೋರಿದ್ದರಿಂದ ಈ ಕೆಳಕಂಡ ಆದೇಶ.

<u>**ಸರ್ಕಾರಿ ಆದೇಶ ಸಂಖ್ಯೆ: ಆಇ 01 ಬಿಪಿಇ 2020, ಬೆಂಗಳೂರು, ದಿನಾಂಕ: 13-03-2020**</u>

ದಿನಾಂಕ:31-01-2020ರ ನಂತರ ಬಿಡುಗಡೆ ಮಾಡುವ ಹಾಗೂ ಆಗುವ ವೆಚ್ಚಗಳಿಗೆ ಸಂಬಂಧಿಸಿದಂತೆ ಈಗಾಗಲೇ ದಿನಾಂಕ:8.1.2020ರ ಆದೇಶದಲ್ಲಿ ನಿಗಧಿಪಡಿಸಿರುವ ದಿನಾಂಕವನ್ನು ಈ ಕೆಳಗಿನಂತೆ ವಿಸ್ತರಿಸಿ ಆದೇಶಿಸಿದೆ.

| ಬಿಲ್ಲುಗಳ ಸ್ವರೂಪ/ವಿವರಗಳು | ದಿ:08/01/2020ರ ಆದೇಶದ ಪ್ರಕಾರ ನಿಗಧಿಪಡಿಸಲಾದ ಕೊನೆಯ ದಿನಾಂಕ | | ವಿಸ್ತರಿಸಿರುವ ದಿನಾಂಕ | |
|---|---|---|---|---|
| | ಹಣ ಬಿಡುಗಡೆ/ upload ಮಾಡಲು ಕಡೆಯ ದಿನಾಂಕ | ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ | ಹಣ ಬಿಡುಗಡೆ/ upload ಮಾಡಲು ಕಡೆಯ ದಿನಾಂಕ | ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ |
| 1) ವೇತನ/ವೇತನ ಬಾಕಿ ಬಿಲ್ಲುಗಳು/ಹಬ್ಬದ ಮುಂಗಡ ಬಿಲ್ಲು / ಅನುದಾನಿತ ವೇತನ ಬಿಲ್ಲುಗಳು | 09-03-2020 | 12-03-2020 | 17-03-2020 | 19-03-2020 |
| 2) ಕಛೇರಿ ವೆಚ್ಚಗಳಿಗೆ ಸಂಬಂಧಿಸಿದಂತೆ ಸಾದಿಲ್ವಾರು ಬಿಲ್ಲುಗಳು/ಪ್ರಯಾಣ ಭತ್ಯೆ ಬಿಲ್ಲುಗಳು. | 09-03-2020 | 12-03-2020 | 17-03-2020 | 19-03-2020 |

| | | | | |
|---|---|---|---|---|
| 3) ವಿದ್ಯುಚ್ಛಕ್ತಿ, ದೂರವಾಣಿ ಹಾಗೂ ಕಟ್ಟಡ ಬಾಡಿಗೆಗೆ ಸಂಬಂಧಿಸಿದ ಬಿಲ್ಲುಗಳು. | | 05–03–2020 | – | 20–03–2020 |

ಮೇಲ್ಕಂಡ ಬಿಲ್ಲುಗಳನ್ನು ಹೊರತುಪಡಿಸಿ, ಉಳಿದ ಬಿಲ್ಲುಗಳನ್ನು ಸಲ್ಲಿಸಲು ಸರ್ಕಾರದ ಆದೇಶ ಸಂಖ್ಯೆ:ಆಇ 01 ಬಿಪಿಇ 2020 ದಿನಾಂಕ:08.01.2020ರಲ್ಲಿ ನಿಗಧಿಗೊಳಿಸಲಾಗಿದ್ದ ಕಾಲಮಿತಿಯು ಮುಂದುವರೆಯುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ,

13/3/2020

(ಹೆಚ್.ಎ.ಶೋಭ)

ಸರ್ಕಾರದ ಉಪ ಕಾರ್ಯದರ್ಶಿ

(ಎಫ್‌ಆರ್ ಮತ್ತು ಬಿಸಿಸಿ)

ಆರ್ಥಿಕ ಇಲಾಖೆ

ಇವರಿಗೆ:-

1) ಮಹಾಲೇಖಪಾಲರು (A&E)/(G&SSA)/(E&RSA), ಕರ್ನಾಟಕ, ಬೆಂಗಳೂರು.
2) ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
3) ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕರ್ನಾಟಕ, ಬೆಂಗಳೂರು.
4) ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ, ಬೆಂಗಳೂರು.
5) ಸರ್ಕಾರದ ಎಲ್ಲಾ ಅಪರ/ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
6) ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
7) ಲೋಕಾಯುಕ್ತರು, ಕರ್ನಾಟಕ, ಬೆಂಗಳೂರು.
8) ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.
9) ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
10) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು /ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
11) ಆಯುಕ್ತರು, ಖಜಾನೆ ಇಲಾಖೆ, ಬೆಂಗಳೂರು.
12) ಎಲ್ಲಾ ಆಂತರಿಕ ಆರ್ಥಿಕ ಸಲಹೆಗಾರರು.
13) ಎಲ್ಲಾ ಇಲಾಖಾ ಮುಖ್ಯಸ್ಥರು.
14) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿಗಳು.